Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

KLS/VDIT/ Date: 10-06-2022

**ಪತ್ರಿಕಾ ಪ್ರಕಟಣೆ**

## "ಆವಿಷ್ಕಾರ್–2022" ತಾಂತ್ರಿಕ ಸಾಂಸ್ಕೃತಿಕ ಉತ್ಸವ

ಕೆ.ಎಲ್.ಎಸ್ ವಿ.ಡಿ.ಐ.ಟಿ ಹಳಿಯಾಳದಲ್ಲಿ ಜೂನ್ 11 ರಂದು ರಾಜ್ಯ ಮಟ್ಟದ ತಾಂತ್ರಿಕ ಸಾಂಸ್ಕೃತಿಕ ಉತ್ಸವ "ಆವಿಷ್ಕಾರ್–2022" ನಡೆಯಲಿದ್ದು ರಾಜ್ಯದ ವಿವಿಧ ಇಂಜನಿಯರಿಂಗ್ ಕಾಲೇಜುಗಳ ಸುಮಾರು 200 ವಿದ್ಯಾರ್ಥಿಗಳು ಮತ್ತು ಮಹಾವಿದ್ಯಾಲಯದ 800 ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಟಾಟಾ ಮೋಟಾರ್ಸ್ ಲಿ. ಧಾರವಾಡದ ಮಾನವ ಸಂಪನ್ಮೂಲ ವಿಭಾಗ ಮುಖ್ಯಸ್ಥರಾದ ಶ್ರೀ. ಡಿ. ಎಸ್. ಆರ್. ಪ್ರಭು ಮುಖ್ಯ ಅತಿಥಿಗಳಾಗಿ ಮತ್ತು ಡೆಪ್ಯೂಟಿ ಜನರಲ್ ಮ್ಯಾನೇಜರ್ ಶ್ರೀ. ರಾಜಶೇಖರ್ ಬೆಲ್ಲದ್ ಗೌರವಾಧ್ಯಕ್ಷರಾಗಿ ಆಗಮಿಸಲಿದ್ದು ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷರಾದ ಶ್ರೀ. ವಿನಾಯಕ ಲೋಕುರ್ ಅಧ್ಯಕ್ಷತೆ ವಹಿಸಲಿದ್ದಾರೆ. ವಿವಿಧ ವಿಭಾಗಗಳಲ್ಲಿ ತಾಂತ್ರಿಕ ಪ್ರಬಂಧ ಮಂಡನೆ, ರಸಪ್ರಶ್ನೆ, ಕಂಪ್ಯೂಟರ್ ಕೋಡಿಂಗ್, ಸಾಕ್ಷ್ಯಚಿತ್ರ ನಿರ್ಮಾಣ, ಹಗ್ಗ ಜಗ್ಗಾಟ, ನೃತ್ಯ, ಹಾಡುಗರಿಕೆ ಸ್ಪರ್ಧೆಗಳು ಈ ಉತ್ಸವದಲ್ಲಿ ನಡೆಯಲಿವೆ. ಮಹಾವಿದ್ಯಾಲಯದ ವಿದ್ಯಾರ್ಥಿಗಳು ಸ್ವತಃ ತಯಾರಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟಕ್ಕಾಗಿ ಮಳಿಗೆಗಳನ್ನು ಹಾಕಲು ಇಲ್ಲಿ ಅವಕಾಶವಿರುತ್ತದೆ. ಪ್ರತಿ ಸ್ಪರ್ಧೆಯ ವಿಜೇತರಿಗೆ ಆಕರ್ಷಕ ಬಹುಮಾನ ನೀಡಲಾಗುತ್ತದೆ.

ಮಹಾವಿದ್ಯಾಲಯದ ಇ ಎಂಡ್ ಸಿ ವಿಭಾಗ ಮುಖ್ಯಸ್ಥರಾದ ಡಾ. ಮಹೇಂದ್ರ ದೀಕ್ಷಿತ್ ಮತ್ತು ಸಿವಿಲ್ ವಿಭಾಗ ಮುಖ್ಯಸ್ಥರಾದ ಪ್ರೊ. ಹರ್ಷ ಜಾಧವ್ ಅವರ ಸಂಚಾಲನೆಯಲ್ಲಿ ಈ ಕಾರ್ಯಕ್ರಮ ಜರುಗಲಿದ್ದು ವಿದ್ಯಾರ್ಥಿಗಳಲ್ಲಡಗಿರುವ ತಾಂತ್ರಿಕ ಕೌಶಲ್ಯ ಮತ್ತು ಸೃಜನಶೀಲತೆಗೆ ಈ ಉತ್ಸವ ವೇದಿಕೆಯಾಗಲಿದೆ ಎಂದು ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal